# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿದಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 03-01-2022 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀ ನಂಜುಂಡಯ್ಯ, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
5. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
6. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು,
7. ಶ್ರೀ ಜೋಶ್ವಾ, ಕರ ವಸೂಲಿಗಾರರು,
8. ಶ್ರೀ ಮುರುಳಿಧರ್, ಸ್ಥಳೀಯರು,
9. ಶ್ರೀ ಸುಬ್ರಮಣಿ, ಸ್ಥಳೀಯರು,
10. ಶ್ರೀ ರವಿಚಂದ್ರನ್, ಸ್ಥಳೀಯರು,
11. ಶ್ರೀ ಪಾಂಡಿಯನ್, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಮುರುಳಿಧರ್, ಸ್ಥಳೀಯರು ಮಾತನಾಡುತ್ತಾ,**

- ಬಿಡಬ್ಲ್ಯೂಎಸ್ಎಸ್‌ಬಿ ವತಿಯಿಂದ ಛೇಂಬರ್‌ನಲ್ಲಿರುವ ಶಿಲ್ಟ್‌ನ್ನು ತೆಗೆದು ರಸ್ತೆಯ ಮೇಲೆ ಹಾಗೆ ಇಟ್ಟಿರುವುದು ಕಂಡುಬಂದಿದ್ದು ಇದರಿಂದ ಸಾರ್ವಜನಿಕರ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಅದನ್ನು ಕೂಡಲೇ ತೆರವುಗೊಳಿಸಲು ಸಭೆಗೆ ತಿಳಿಸಿದರು.
- ಬೆಸ್ಕಾಂ ವತಿಯಿಂದ ರಸ್ತೆಯ ಪಕ್ಕದಲ್ಲಿರುವ ಮರಗಳನ್ನು ಕಡಿದು ರಸ್ತೆ ಮತ್ತು ಪಾದಾಚಾರಿ ಮಾರ್ಗದಲ್ಲಿಯೇ ಬಿಟ್ಟು ಹೋಗುತ್ತಿದ್ದು, ಅದನ್ನು ಆಗಿಂದ್ದಾಗ್ಗೆ ಸದರಿ ಸ್ಥಳದಿಂದ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು ದ್ವಿ ಚಕ್ರ ವಾಹನಗಳು ಕಳ್ಳತನವಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲು ಸಭೆಗೆ ತಿಳಿಸಿದರು.

2) **ಶ್ರೀ ಸುಬ್ರಮಣಿ, ಸ್ಥಳೀಯರು, ಮಾತನಾಡುತ್ತಾ,**

- ಸೀತಮ್ಮ ರಸ್ತೆಯಲ್ಲಿ ವಸತಿ ಪ್ರದೇಶದಲ್ಲಿ ವಾಹನಗಳ (ಸ್ವಚ್ಛತೆ) ಸರ್ವಿಸ್ ಸ್ಟೇಷನ್ ಇಟ್ಟು, ವಾಹನ ತೊಳೆಯುವ ನೀರು ಚರಂಡಿ ಮತ್ತು ರಸ್ತೆಗೆ ಹರಿಯುತ್ತಿದ್ದು, ಇದರ ಬಗ್ಗೆ ಕ್ರಮ ವಹಿಸಲು ಕೋರಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ಅಲ್ಲಲ್ಲಿ ಕಸವನ್ನು ರಸ್ತೆಯ ಪಕ್ಕದಲ್ಲಿ ಬಿಸಾಡಿ ಹೋಗುತ್ತಿರುವುದು ಕಂಡುಬಂದಿದ್ದು, ಈ ಬೆಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಈ ಬಗ್ಗೆ

ಅರಿವು ಮೂಡಿಸಿ, ಕಸವನ್ನು ಪಾಲಿಕೆ ವಾಹನಗಳಿಗೆ ನೀಡಲು ಕ್ರಮ ವಹಿಸಲು ಹಾಗೂ ಈಗಾಗಲೇ ರಸ್ತೆಯ ಪಕ್ಕದಲ್ಲಿ ಬಿದ್ದಿರುವ ಕಸವನ್ನು ತೆರವುಗೊಳಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ವರ್ಷ ಬೇಸಿಗೆ ಕಾಲದಲ್ಲಿ ನೀರಿನ ಅಭಾವ ಹೆಚ್ಚಾಗುತ್ತಿದ್ದು, ಇದನ್ನು ನೀಗಿಸಲು ವಾರ್ಡ್ ವ್ಯಾಪ್ತಿಯಲ್ಲಿ 02 ಬೋರ್‌ವೆಲ್‌ಗಳನ್ನು ಕೊರೆಯಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

3) **ಶ್ರೀ ರವಿಚಂದ್ರನ್, ಸ್ಥಳೀಯರು, ಮಾತನಾಡುತ್ತಾ,**

- ನವ ನಗರೋತ್ಥಾನ ಅನುದಾನದಲ್ಲಿ ಮಂಜೂರಾಗಿರುವ ರಸ್ತೆಗಳಿಗೆ ಕೂಡಲೇ ಡಾಂಬರೀಕರಣ ಮಾಡಲು ತಿಳಿಸಿದರು.
- ನಂದಿನಿ ರಸ್ತೆಯಲ್ಲಿ ಈಗಾಗಲೇ ಒಂದು ಕಡೆಯಲ್ಲಿ ಚರಂಡಿ ಅಭಿವೃದ್ಧಿ ಮಾಡಿದ್ದು, ಇನ್ನೊಂದು ಕಡೆಯಲ್ಲಿ ಚರಂಡಿ ಇಲ್ಲದೇ ಇರುವುದರಿಂದ ಇನ್ನೊಂದು ಕಡೆ ಚರಂಡಿ ನಿರ್ಮಾಣ ಮಾಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

4) **ಶ್ರೀ ಪಾಂಡಿಯನ್, ಸ್ಥಳೀಯರು, ಮಾತನಾಡುತ್ತಾ,**

- 1ನೇ ಅಡ್ಡರಸ್ತೆ, ನೆಹರು ರಸ್ತೆಯಲ್ಲಿ ಬಿರಿಯಾನಿ ಅಂಗಡಿ ಮಾಲೀಕರು ಪಾದಾಚಾರಿ ಮಾರ್ಗದಲ್ಲಿ ಇಟ್ಟಿದ್ದು, ರಸ್ತೆಯಲ್ಲಿ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಕೂಡಲೇ ಕ್ರಮ ವಹಿಸಲು ಸಭೆಗೆ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

<u>ಪ್ರತಿಯನ್ನು</u>

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಕಯ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.